STD

# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ : 501
2. ಸದಸ್ಯರ ಹೆಸರು : ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ)
3. ಉತ್ತರಿಸುವ ದಿನಾಂಕ : 16/12/2021
4. ಉತ್ತರಿಸುವ ಸಚಿವರ ಹೆಸರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಶಿಶುಪಾಲನಾ ರಜೆಯನ್ನು ಸರ್ಕಾರಿ ಮಹಿಳಾ ಅಧಿಕಾರಿ/ನೌಕರರಿಗೆ ಯಾವ ದಿನಾಂಕದಿಂದ ಜಾರಿಗೆ ತರಲಾಗಿದೆ; ಆದೇಶ ಹೊರಡಿಸಲು ನಿರ್ಧರಿತವಾದ ಮಾನದಂಡಗಳೇನು; ರಜೆ ಮಂಜೂರಾತಿಗೆ ಅನುಸರಿಸುವ ಕ್ರಮಗಳೇನು;(ಆದೇಶದ ಪ್ರತಿ ನೀಡುವುದು) | ಆರ್ಥಿಕ ವರ್ಷ 2021-22ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-37ರಲ್ಲಿ ಘೋಷಿಸಿರುವಂತೆ, ಸರ್ಕಾರಿ ಮಹಿಳಾ ಅಧಿಕಾರಿ/ನೌಕರರಿಗೆ ಸರ್ಕಾರಿ ಆದೇಶ ಸಂಖ್ಯೆ:ಆಇ 4(ಇ) ಸೇನಿಸೇ 2021, ದಿನಾಂಕ:21/06/2021ರನ್ವಯ ಶಿಶುಪಾಲನಾ ರಜೆಯ ಸೌಲಭ್ಯವನ್ನು ಆದೇಶದ ದಿನಾಂಕದಿಂದ ಜಾರಿಗೆ ತರಲಾಗಿರುತ್ತದೆ. ಈ ಆದೇಶದಲ್ಲಿ ಸದರಿ ರಜೆಯನ್ನು ಮಂಜೂರು ಮಾಡಲು ಅನುಸರಿಸುವ ಕ್ರಮಗಳನ್ನು ಈ ಕೆಳಕಂಡಂತೆ ವಿವರಿಸಲಾಗಿದೆ.<br>ಮಹಿಳಾ ಸರ್ಕಾರಿ ನೌಕರರ, ಅತ್ಯಂತ ಕಿರಿಯ ಮಗುವು 18 ವರ್ಷ ತಲುಪುವವರೆಗಿನ ಅವಧಿಗೆ ಈ ರಜೆಯ ಸೌಲಭ್ಯವನ್ನು ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ. ಪ್ರತಿ ಬಾರಿಯ ಈ ರಜೆ ಮಂಜೂರಾತಿಯು ಕನಿಷ್ಟ 15 ದಿನಗಳಿಗಿಂತ ಕಡಿಮೆ ಇರಬಾರದೆಂದು ತಿಳಿಸಲಾಗಿದೆ. ಈ ರಜೆಯನ್ನು ಯಾವುದೇ ರಜೆ ಲೆಕ್ಕದಿಂದ ಕಳೆಯತಕ್ಕದ್ದಾಗಿರುವುದಿಲ್ಲ.<br>ಶಿಶುಪಾಲನಾ ರಜೆಯ ಮಂಜೂರಾತಿಗಾಗಿ ಯಾವುದೇ ಪೂರಕ ದಾಖಲೆಗಳನ್ನು ಪಡೆಯುವ ಅವಶ್ಯಕತೆಯಿರುವುದಿಲ್ಲ. ಸೇವಾ ಪುಸ್ತಕದಲ್ಲಿ |



Generated from eOffice by G JAGADEESHA, CMO-JS(GJ), JOINT SECREATRY, CMO on 14/12/2021 02:58 PM

| | | |
|---|---|---|
| | | ನಮೂದಿಸಿರುವ ಮಕ್ಕಳ ವಿವರಗಳ ಆಧಾರದ ಮೇಲೆ ಮಂಜೂರು ಮಾಡಲು ಅವಕಾಶವಿರುತ್ತದೆ. ಆದೇಶದ ಪ್ರತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಆ) | ಸರ್ಕಾರಿ ಅಧಿಕಾರಿ/ನೌಕರರಿಗೆ ಲಭ್ಯವಿರುವ ಮಾತೃತ್ವ ಹಾಗೂ ಪಿತೃತ್ವ ರಜೆಗಳ ವಿವರಗಳೇನು; (ನಿಗಧಿಪಡಿಸಿರುವ ರಜಾ ದಿನಗಳ ಮಾಹಿತಿಗಳನ್ನು ತಿಳಿಸುವುದು.) | ಸರ್ಕಾರಿ ಮಹಿಳಾ ನೌಕರರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 135(1)ರನ್ವಯ ಪ್ರಸೂತಿ ರಜೆಯನ್ನು ಎರಡು ಜೀವಂತ ಮಕ್ಕಳ ಪ್ರಸೂತಿಗೆ ಆರಂಭದ ದಿನಾಂಕದಿಂದ 180 ದಿನಗಳವರೆಗೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಅದೇ ನಿಯಮಾವಳಿಯ ನಿಯಮ 135 ಜಿ(1) ರನ್ವಯ ಪುರುಷ ಸರ್ಕಾರಿ ನೌಕರನಿಗೆ ಅವನ ಪತ್ನಿಯ ಹೆರಿಗೆಯ ಕಾಲದಲ್ಲಿ ಎರಡು ಜೀವಂತ ಮಕ್ಕಳ ಪ್ರಸೂತಿಗೆ ಪ್ರತಿ ಬಾರಿಗೆ 15 ದಿನಗಳ ಪಿತೃತ್ವ ರಜೆಯನ್ನು ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ. |
| ಇ) | "ಶಿಶು" ಪದದ ವ್ಯಾಖ್ಯಾನ ಹಾಗೂ ಶಿಶು ಎಂದು ಪರಿಗಣಿಸಲು ನಿರ್ಧರಿಸಬಹುದಾದ ವಯೋಮಿತಿಯನ್ನು ತಿಳಿಸುವುದು. | 18 ವರ್ಷ ತಲುಪುವವರೆಗಿನ ಮಕ್ಕಳನ್ನು ಶಿಶು ಎಂದು ಪರಿಗಣಿಸಲಾಗಿದೆ. |
| ಈ) | 1 ಅಥವಾ 2 ವಯಸ್ಸಿನ ಶಿಶು ಹೊಂದಿರುವ ತಾಯಿಗೂ ಹಾಗೂ 16 ಅಥವಾ 17 ವರ್ಷದ ವಯಸ್ಸಿನ ಶಿಶುವಿನ ಮಹಿಳಾ ನೌಕರರಿಗೆ 180 ದಿನಗಳು ಸಮಾನ ರೂಪದ ರಜೆ ಪಡೆಯಲು ಆದೇಶ ಹೊರಡಿಸಿದಾಗ ತಾರತಮ್ಯವಾಗುವುದಿಲ್ಲವೇ; ಇದನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು. | ಈ ಸೌಲಭ್ಯವು ಯಾವುದೇ ತಾರತಮ್ಯವಿಲ್ಲದೇ ಕಿರಿಯ ಮಗು 18 ವರ್ಷ ತಲುಪುವವರೆಗೂ ಸರ್ಕಾರಿ ಮಹಿಳಾ ನೌಕರರಿಗೆ ಮಂಜೂರು ಮಾಡುವ ಸದುದ್ದೇಶದಿಂದ ಕೂಡಿರುತ್ತದೆ. ಆದುದರಿಂದ ಯಾವುದೇ ತಾರತಮ್ಯದ ಪ್ರಶ್ನೆ ಉದ್ಭವಿಸುವುದಿಲ್ಲ. |
| ಉ) | ಪತ್ನಿಯು ನಿಧನ ಹೊಂದಿರುವ ಪುರುಷ ಸರ್ಕಾರಿ ಅಧಿಕಾರಿ/ನೌಕರರಿಗೆ ಶಿಶುಪಾಲನಾ ರಜೆ ಅನ್ವಯಿಸುವುದಿಲ್ಲವೇ; ಇಲ್ಲದಿದ್ದಲ್ಲಿ ತಾರತಮ್ಯವಾಗುವುದಿಲ್ಲವೇ; ಈ ಸಂಬಂಧ ಶಿಶುಪಾಲನಾ ಆದೇಶವನ್ನು ತಕ್ಷಣ ನಿಲ್ಲಿಸಲು | ಇಲ್ಲ.<br>ಆರ್ಥಿಕ ವರ್ಷ 2021-22ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-37ರಲ್ಲಿ ರಾಜ್ಯ ಸರ್ಕಾರದ ಆಡಳಿತ ಯಂತ್ರದ ಬಹುಮುಖ್ಯ ಭಾಗವಾಗಿರುವ ಮಹಿಳೆಯರ ಕ್ಷೇಮಾಭಿವೃದ್ಧಿಗೆ |



Generated from eOffice by G JAGADEESHA, CMO-JS(GJ), JOINT SECREATRY, CMO on 14/12/2021 02:58 PM

| | | |
|---|---|---|
| | ತೆಗೆದುಕೊಂಡಿರುವ ಕ್ರಮಗಳೇನು: ಆದೇಶದಲ್ಲಿ ಒಳಗೊಂಡಿರುವ ಲೋಪದೋಷಗಳನ್ನು ಸರಿಪಡಿಸಿ ಮಾರ್ಪಾಡು ಆದೇಶ ಹೊರಡಿಸಲಾಗುವುದೇ?(ವಿವರ ನೀಡುವುದು) | ಪೂರಕವಾಗಿ ಹಾಗೂ ಮಹಿಳೆಯರ ಕಾರ್ಯಕ್ಷಮತೆ ಹೆಚ್ಚಿಸುವ ಸದುದ್ದೇಶದಿಂದ ಮಹಿಳಾ ಉದ್ಯೋಗಿಗಳಿಗೆ ಚಾಲ್ತಿಯಲ್ಲಿರುವ ಪ್ರಸೂತಿ ರಜೆಯೊಂದಿಗೆ ಶಿಶುಪಾಲನಾ ರಜೆ ಸೌಲಭ್ಯವನ್ನು ಘೋಷಿಸಲಾಗಿದ್ದು, ಅದರನ್ವಯ ಸದರಿ ಆದೇಶವನ್ನು ಹೊರಡಿಸಲಾಗಿದೆ. ಸದರಿ ಆದೇಶದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅಥವಾ ಆದೇಶದಲ್ಲಿ ಲೋಪದೋಷಗಳಿರುವ ಬಗ್ಗೆ ಸರ್ಕಾರಕ್ಕೆ ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. ಆದುದರಿಂದ ಇದನ್ನು ಹಿಂಪಡೆಯುವ ಕುರಿತು ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ

**ಸಂಖ್ಯೆ: ಆಇ 11(ಇ) ಸೇನಿಸೇ 2021**



Generated from eOffice by G JAGADEESHA, CMO-JS(GJ), JOINT SECREATRY, CMO on 14/12/2021 02:58 PM

**ಶ್ರೀ ಆಯನೂರು ಮಂಜುನಾಥ್, ಮಾನ್ಯ ವಿಧಾನ ಪರಿಷತ್ ಸದಸ್ಯರು (ಪದವೀಧರರ ಕ್ಷೇತ್ರ), ರವರು ಮಂಡಿಸಿರುವ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 501 ಕ್ಕೆ ಪೂರಕ ಟಿಪ್ಪಣಿ.**

ಆರ್ಥಿಕ ವರ್ಷ 2021-22ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-37ರಲ್ಲಿ ರಾಜ್ಯ ಸರ್ಕಾರದ ಆಡಳಿತ ಯಂತ್ರದ ಬಹುಮುಖ್ಯ ಭಾಗವಾಗಿರುವ ಮಹಿಳಾ ಉದ್ಯೋಗಿಗಳ ಕ್ಷೇಮಾಭಿವೃದ್ಧಿಗೆ ಪೂರಕವಾಗಿ ಹಾಗೂ ಅವರ ಕಾರ್ಯಕ್ಷಮತೆ ಹೆಚ್ಚಿಸುವ ನಿಟ್ಟಿನಲ್ಲಿ ಮಹಿಳಾ ಉದ್ಯೋಗಿಗಳಿಗೆ ಚಾಲ್ತಿಯಲ್ಲಿರುವ ಪ್ರಸೂತಿ ರಜೆಯೊಂದಿಗೆ ಶಿಶುಪಾಲನಾ ರಜೆ ಸೌಲಭ್ಯವನ್ನು ಘೋಷಿಸಲಾಗಿದ್ದು, ಸರ್ಕಾರದ ಆದೇಶ ಸಂಖ್ಯೆ:ಆಇ 4(ಇ) ಸೇನಿಸೇ 2021, ದಿನಾಂಕ:21/06/2021ರನ್ವಯ ಈ ಸೌಲಭ್ಯವನ್ನು ದಿನಾಂಕ:21/06/2021 ರಿಂದ ಜಾರಿಗೆ ತರಲಾಗಿದೆ. ಈ ಆದೇಶದಲ್ಲಿ ಸದರಿ ರಜೆಯನ್ನು ಮಂಜೂರು ಮಾಡಲು ಅನುಸರಿಸಬೇಕಾದ ಕ್ರಮಗಳನ್ನು ವಿವರಿಸಲಾಗಿದೆ (ಅನುಬಂಧ-1).

ಇದಲ್ಲದೆ, ಸರ್ಕಾರಿ ಮಹಿಳಾ ನೌಕರರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 135(1)ರನ್ವಯ ಪ್ರಸೂತಿ ರಜೆಯನ್ನು ಎರಡು ಜೀವಂತ ಮಕ್ಕಳ ಪ್ರಸೂತಿಗೆ ಆರಂಭದ ದಿನಾಂಕದಿಂದ 180 ದಿನಗಳವರೆಗೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ(ಅನುಬಂಧ-2). ಮುಂದುವರೆದು, ಇದೇ ನಿಯಮಾವಳಿಯ ನಿಯಮ 135 ಬಿ(1) ರನ್ವಯ ಪುರುಷ ಸರ್ಕಾರಿ ನೌಕರನಿಗೆ ಅವನ ಪತ್ನಿಯ ಹೆರಿಗೆಯ ಕಾಲದಲ್ಲಿ ಎರಡು ಜೀವಂತ ಮಕ್ಕಳ ಪ್ರಸೂತಿಗೆ 15 ದಿನಗಳ ಪಿತೃತ್ವ ರಜೆಯನ್ನು ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ (ಅನುಬಂಧ-3).

ಶಿಶುಪಾಲನಾ ರಜೆ ಸೌಲಭ್ಯವನ್ನು ಕೇಂದ್ರ ಸರ್ಕಾರದಲ್ಲಿಯೂ ಜಾರಿಗೆ ತಂದಿದ್ದು, ದಿನಾಂಕ:11/09/2008ರ ಕೇಂದ್ರ ಸರ್ಕಾರದ ಅಧಿಕೃತ ಜ್ಞಾಪನದ ಮಾರ್ಗಸೂಚಿಗಳನ್ನನುಸರಿಸಿ ಶಿಶುಪಾಲನಾ ರಜೆಯ ಸೌಲಭ್ಯಕ್ಕಾಗಿ 18 ವರ್ಷಗಳವರೆಗಿನ ಮಕ್ಕಳನ್ನು ಶಿಶು ಎಂದು ಪರಿಗಣಿಸಲಾಗಿದೆ (ಅನುಬಂಧ-4). ಅದೇ ಮಾನದಂಡಗಳನ್ನು ರಾಜ್ಯದಲ್ಲಿಯೂ ಅನುಸರಿಸಲಾಗಿದೆ.

ಈ ಸೌಲಭ್ಯವು ಯಾವುದೇ ತಾರತಮ್ಯವಿಲ್ಲದೇ ಕಿರಿಯ ಮಗು 18 ವರ್ಷ ತಲುಪುವವರೆಗೂ ಸರ್ಕಾರಿ ಮಹಿಳಾ ನೌಕರರಿಗೆ ಮಂಜೂರು ಮಾಡುವ ಸದುದ್ದೇಶದಿಂದ ಕೂಡಿರುತ್ತದೆ. ಈ ಬಗ್ಗೆ ಯಾವುದೇ ದೂರುಗಳು/ವರದಿಗಳು ಈವರೆಗೂ ಸ್ವೀಕೃತವಾಗಿರುವುದಿಲ್ಲ.

*****

ಅನುಬಂಧ - 1

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಶಿಶುಪಾಲನಾ ರಜೆ ಮಂಜೂರು ಮಾಡುವ ಕುರಿತು.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ: ಆಇ 1 ಸೇನಿಸೇ 2011, ದಿನಾಂಕ:29.06.2011.

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಆದೇಶದಲ್ಲಿ ಬುದ್ಧಿಮಾಂದ್ಯ/ಅಂಗವಿಕಲ ಮಕ್ಕಳನ್ನು ನೋಡಿಕೊಳ್ಳಲು ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ವೈದ್ಯಕೀಯ ಮಂಡಳಿಯ ಪ್ರಮಾಣ ಪತ್ರ ಆಧಾರದ ಮೇಲೆ ಕೆಲವು ಷರತ್ತುಗಳಿಗೊಳಪಟ್ಟು ಒಂದು ವರ್ಷದಲ್ಲಿ ಮೂರು ಕಂತುಗಳಿಗೆ ಮೀರದಂತೆ ಹಾಗೂ 15 ದಿನಗಳಿಗೆ ಕಡಿಮೆ ಇಲ್ಲದಂತೆ ಇಡೀ ಸೇವಾವಧಿಯಲ್ಲಿ ಎರಡು ವರ್ಷಗಳ ಅವಧಿಗೆ ಅಂದರೆ 730 ದಿನಗಳ ಶಿಶುಪಾಲನಾ ರಜೆಯನ್ನು ಮಂಜೂರು ಮಾಡಲಾಗಿದೆ.

ಪ್ರಸಕ್ತ ಸರ್ಕಾರವು 2021-22ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-37ರಲ್ಲಿ ರಾಜ್ಯ ಸರ್ಕಾರದ ಮಹಿಳಾ ನೌಕರರಿಗೆ ಚಾಲ್ತಿಯಲ್ಲಿರುವ ಪ್ರಸೂತಿ ರಜೆಯೊಂದಿಗೆ ಒಟ್ಟು ಸೇವಾವಧಿಯಲ್ಲಿ ಆರು ತಿಂಗಳವರೆಗೆ ಅಂದರೆ 180 ದಿನಗಳ ಶಿಶುಪಾಲನಾ ರಜೆಯನ್ನು ಘೋಷಿಸಿದ್ದು, ಈ ಕುರಿತಂತೆ ರಾಜ್ಯ ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 4(ಆ) ಸೇನಿಸೇ 2021 ಬೆಂಗಳೂರು, ದಿನಾಂಕ: 21.06.2021**

ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಈ ಕೆಳಕಂಡ ಷರತ್ತುಗಳ ಮೇರೆಗೆ ಇಡೀ ಸೇವಾವಧಿಯಲ್ಲಿ ಗರಿಷ್ಠ ಆರು ತಿಂಗಳವರೆಗೆ ಅಂದರೆ 180 ದಿನಗಳ "ಶಿಶುಪಾಲನಾ ರಜೆ"ಯನ್ನು, ರಜೆಯನ್ನು ಮಂಜೂರು ಮಾಡುವ ಸಕ್ಷಮ ಪ್ರಾಧಿಕಾರವು ಮಂಜೂರು ಮಾಡತಕ್ಕದ್ದು.

i) ಮಹಿಳಾ ಸರ್ಕಾರಿ ನೌಕರಳು ಹೊಂದಿರುವ ಮಕ್ಕಳ ಸಂಖ್ಯೆಯನ್ನು ಪರಿಗಣಿಸದೆ, ಅತ್ಯಂತ ಕಿರಿಯ ಮಗುವು 18 ವರ್ಷ ತಲುಪುವವರೆಗಿನ ಅವಧಿಗೆ ಮಾತ್ರ ಈ ರಜೆಯ ಸೌಲಭ್ಯಕ್ಕೆ ಅರ್ಹರಾಗತಕ್ಕದ್ದು.

ii) ಈ ರಜೆಯ ಅವಧಿಯಲ್ಲಿ ಅವಳು ರಜೆಯ ಮೇಲೆ ಹೋಗುವ ನಿಕಟ ಪೂರ್ವದಲ್ಲಿ ಪಡೆಯಲರ್ಹವಿರುವ ಸಂಪೂರ್ಣ ವೇತನಕ್ಕೆ ಸಮನಾದ ರಜೆ ಸಂಬಳಕ್ಕೆ ಅರ್ಹರಾಗತಕ್ಕದ್ದು.

iii) ಪ್ರತಿ ಬಾರಿಯ ಈ ರಜೆ ಮಂಜೂರಾತಿಯು ಕನಿಷ್ಠ 15 ದಿನಗಳಿಗಿಂತ ಕಡಿಮೆ ಇರಬಾರದು.

iv) ಮಹಿಳಾ ಸರ್ಕಾರಿ ನೌಕರಳು ಈ ರಜೆಯನ್ನು ಸಾಂದರ್ಭಿಕ ರಜೆಯ ಹೊರತಾಗಿ, ನಿಯಮಾನುಸಾರ ಪಡೆಯಲರ್ಹವಿರುವ ಅಸಾಧಾರಣ ರಜೆಯೂ ಒಳಗೊಂಡಂತೆ ಇತರೆ ರಜೆಯೊಂದಿಗೆ ಸಂಯೋಜಿಸಿ ಪಡೆಯಬಹುದು.

v) ಈ ರಜೆಯನ್ನು ಯಾವುದೇ ರಜೆ ಲೆಕ್ಕದಿಂದ ಕಳೆಯತಕ್ಕದ್ದಲ್ಲ. ಉಪಯೋಗಿಸಿಕೊಳ್ಳದ ಈ ಸೌಲಭ್ಯದ ಸಂಬಂಧದಲ್ಲಿನ ರಜೆಯನ್ನು ಗಳಿಕೆ ರಜೆ ಲೆಕ್ಕಕ್ಕೆ ಜಮೆಗೊಳಿಸಲು/ನಗದೀಕರಿಸಲು ಅವಕಾಶವಿರುವುದಿಲ್ಲ.

vi) ಬುದ್ಧಿಮಾಂದ್ಯ/ಅಂಗವಿಕಲ ಮಕ್ಕಳನ್ನು ಹೊಂದಿರುವ ಸರ್ಕಾರಿ ಮಹಿಳಾ ನೌಕರರಿಗೆ ಮಂಜೂರು ಮಾಡಿರುವ 730 ದಿನಗಳ ಶಿಶುಪಾಲನಾ ರಜೆ ಸೌಲಭ್ಯಕ್ಕೆ ಅರ್ಹರಾದ ಯಾವುದೇ ನೌಕರಳು ಆ ಯೋಜನೆಯನ್ನು ಆಯ್ಕೆ ಮಾಡಿಕೊಳ್ಳತಕ್ಕದ್ದು, ಅದರೊಂದಿಗೆ ಈ ಯೋಜನೆಯಡಿಯಲ್ಲಿನ ಸೌಲಭ್ಯಕ್ಕೂ ಅರ್ಹರಾಗತಕ್ಕದ್ದಲ್ಲ.

vii) ಶಿಶುಪಾಲನಾ ರಜೆಯ ಮಂಜೂರಾತಿಗಾಗಿ ಯಾವುದೇ ಪೂರಕ ದಾಖಲೆಗಳನ್ನು ಪಡೆಯುವ ಅವಶ್ಯಕತೆಯಿರುವುದಿಲ್ಲ. ಸೇವಾ ಪುಸ್ತಕದಲ್ಲಿ ನಮೂದಿಸಿರುವ ಮಕ್ಕಳ ವಿವರಗಳ ಆಧಾರದ ಮೇಲೆ ಮಂಜೂರು ಮಾಡತಕ್ಕದ್ದು.

viii) ಈ ಮೊದಲೇ ಮಂಜೂರಾಗಿರುವ ಯಾವುದೇ ಬಗೆಯ ರಜೆಯನ್ನು ಶಿಶುಪಾಲನಾ ರಜೆಯಾಗಿ ಪರಿವರ್ತಿಸತಕ್ಕದ್ದಲ್ಲ. ಈ ಆದೇಶದಡಿಯಲ್ಲಿನ ಸೌಲಭ್ಯವು ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೊಳ್ಳತಕ್ಕದ್ದು.

ix) ಈ ರಜೆಯನ್ನು ಮಂಜೂರು ಮಾಡುವ ಸಕ್ಷಮವಾದ ಪ್ರಾಧಿಕಾರವು ಶಿಶುಪಾಲನಾ ರಜೆಯ ಮಂಜೂರಾತಿಯನ್ನು ಸೇವಾ ಪುಸ್ತಕದಲ್ಲಿ ದಾಖಲು ಮಾಡುವುದು ಮತ್ತು ನಿಗದಿತ ನಮೂನೆಯಲ್ಲಿ ಲೆಕ್ಕವಿಡಬೇಕು.(ವಿಶೇಷ ಮಕ್ಕಳ ಶಿಶುಪಾಲನಾ ರಜೆಯ ಲೆಕ್ಕವನ್ನಿಡುವ ಪ್ರಪತ್ರದ ಮಾದರಿಯಲ್ಲಿ)

ಈ ಬಗ್ಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳಿಗೆ ಪ್ರತ್ಯೇಕವಾಗಿ ಸೂಕ್ತ ತಿದ್ದುಪಡಿ ತರಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪಿ.ಎಸ್.ಸುವರ್ಣ),
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-1).

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು. ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
2. ಮಹಾಲೇಖಪಾಲರು (ಇ & ಆರ್‌ಎಸ್‌ಎ), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
3. ಮಹಾಲೇಖಪಾಲರು (ಎ & ಇ), ಕರ್ನಾಟಕ, ಪೋಸ್ಟ್ ಬಾಕ್ಸ್ ಸಂಖ್ಯೆ-5329/5369, ಪಾರ್ಕ್ ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರ ಮುಖ್ಯ ಕಾರ್ಯದರ್ಶಿಗಳು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
9. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
15. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
16. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
17. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145-ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ, ವಿಧಾನ ಮಂಡಲದ ಗ್ರಂಥಾಲಯ.
22. [illegible]

(ಕ್ರಮ ಸಂಖ್ಯೆ 1 ರಿಂದ 3 ಹಾಗೂ 15 ರಿಂದ 17 ರವರೆಗೆ ನಮೂದಿಸಲಾದ ಅಧಿಕಾರಿಗಳಿಗೆ ಹಸ್ತದ ಮೂಲಕ).

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ವೀಕ್ಷಿಸಿ.

ಅನುಬಂಧ-2

## ವಿಭಾಗ-4 ಪ್ರಸೂತಿ (ಹೆರಿಗೆ) ರಜೆ (Maternity Leave)

135 (1) ಮಹಿಳಾ ಸರ್ಕಾರಿ ನೌಕರರಿಗೆ ಸಕ್ಷಮ ಪ್ರಾಧಿಕಾರಿಯು ಪ್ರಸೂತಿ (ಹೆರಿಗೆ) ರಜೆಯನ್ನು ಅದರ ಪ್ರಾರಂಭದ ದಿನಾಂಕದಿಂದ 180 ದಿನಗಳವರೆಗೆ ಮಂಜೂರು ಮಾಡಬಹುದು. ರಜೆಯ ಅವಧಿಯಲ್ಲಿ ಆಕೆಗೆ ರಜೆಯ ಮೇಲೆ ಹೋಗುವ ನಿಕಟಪೂರ್ವದಲ್ಲಿ ಪಡೆಯುತ್ತಿದ್ದ ವೇತನಕ್ಕೆ ಸಮನಾದ ರಜಾ ವೇತನವನ್ನು ನೀಡತಕ್ಕದ್ದು.

(2) ಉಪನಿಯಮ(1) ರ ಮೇರೆಗೆ ಪ್ರಸೂತಿ ರಜೆಯನ್ನು ಗರ್ಭಸ್ರಾವ, ಅಥವಾ ಗರ್ಭಪಾತ, ಗರ್ಭಧಾರಣೆಯ ವೈದ್ಯಕೀಯ ಸಮಾಪನಗಳ ಅಧಿನಿಯಮ 1971ರ ಮೇರೆಗೆ ಪ್ರೇರಣೆಯಿಂದ ಮಾಡಿಕೊಂಡ ಗರ್ಭಪಾತವೂ ಸೇರಿದ ಸಂದರ್ಭದಲ್ಲಿ :-

(ಎ) ರಜೆಯು ಆರು ವಾರಗಳನ್ನು ಮೀರದಿರುವ ಮತ್ತು

(ಬಿ) ಅಂತಹ ರಜೆಗಾಗಿ ಸಲ್ಲಿಸಿದ ಅರ್ಜಿಯು ನೋಂದಾಯಿತ ವೃತ್ತಿನಿರತ ವೈದ್ಯರಿಂದ ಪಡೆದ ಪ್ರಮಾಣಪತ್ರದಿಂದ ಸಮರ್ಥಿತವಾಗಿರಬೇಕು ಎಂಬ ಷರತ್ತುಗೊಳಪಟ್ಟು, ಮಂಜೂರು ಮಾಡಬಹುದು.

(3) ಎರಡು ಅಥವಾ ಹೆಚ್ಚು ಜೀವಂತ ಮಕ್ಕಳನ್ನು ಹೊಂದಿರುವ ಮಹಿಳಾ ಸರ್ಕಾರಿ ನೌಕರಳಿಗೆ ಮೇಲಿನ (1) ಅಥವಾ (2) ನೇ ಉಪನಿಯಮದ ಮೇರೆಗೆ ಪ್ರಸೂತಿ ರಜೆಯನ್ನು ಅನುಮತಿಸತಕ್ಕದ್ದಲ್ಲ.

(4) (ಎ) ಪ್ರಸೂತಿ ರಜೆಯನ್ನು ಬಾಕಿಯಿರುವ ರಜೆ ಅಥವಾ ಇನ್ನಾವುದೇ ರೀತಿಯ ರಜೆಯೊಂದಿಗೆ ಸೇರಿಸಬಹುದು. ವೈದ್ಯಕೀಯ ಪ್ರಮಾಣಪತ್ರವನ್ನು ಹಾಜರು ಪಡಿಸದೇ ಇದ್ದರೂ 60 ದಿನಗಳಿಗೆ ಮೀರದಂತೆ ಅಂಥ ರಜೆಯನ್ನು ಮಂಜೂರು ಮಾಡಬಹುದು.

(ಬಿ) (4)ನೇ ಉಪನಿಯಮದ (ಎ) ಖಂಡದ ಮೇರೆಗೆ ಮಂಜೂರಾದ ರಜೆಯನ್ನು ಮುಂದುವರಿಸಿ, ಹೆಚ್ಚಿನ ರಜೆಯನ್ನು ಅಧಿಕೃತ ವೈದ್ಯಕೀಯ ಸಹಾಯಕರು ನೀಡುವ ವೈದ್ಯಕೀಯ ಪ್ರಮಾಣಪತ್ರವನ್ನು ಹಾಜರುಪಡಿಸುವುದಕ್ಕೊಳಪಟ್ಟು

1 ಸ.ಆ.ಸಂಖ್ಯೆ : ಆಇ 15 ಸೇನಿರ 2012 ದಿ: 29.01.2014 [illegible] ದಿ: 01.04.2014 ರಿಂದ ಜಾರಿಗೆ ಬರುವಂತೆ

ಖಾಯಂ ಅಲ್ಲದ ಸರ್ಕಾರಿ ನೌಕರರುಗಳಿಗೆ ಮಂಜೂರು ಮಾಡಬಹುದು. ಆದರೆ ಅಂಥ ಮಗುವಿಗೆ ತಾಯಿಯ ವೈಯಕ್ತಿಕ ಗಮನದ ಮತ್ತು ಮಗುವಿನ ಹತ್ತಿರ ತಾಯಿ ಇರುವುದು ಮತ್ತು ಅವಶ್ಯಕತೆ ಇರುವುದನ್ನು ಅಧಿಕೃತ ವೈದ್ಯಕೀಯ ಸಹಾಯಕರು ನೀಡುವ ವೈದ್ಯಕೀಯ ಪ್ರಮಾಣಪತ್ರ ಹಾಜರುಪಡಿಸಬೇಕು.

(5) ಪ್ರಸೂತಿ ರಜೆಯನ್ನು ಯಾವುದೇ ರಜೆಯ ಲೆಕ್ಕದಿಂದ ಕಳೆಯತಕ್ಕದ್ದಲ್ಲ.

[1] 135A ಮಗುವನ್ನು ದತ್ತು ತೆಗೆದುಕೊಂಡಾಗ ಮಹಿಳಾ ಸರ್ಕಾರಿ ನೌಕರರುಗಳಿಗೆ ರಜೆ : ಮಹಿಳಾ ಸರ್ಕಾರಿ ನೌಕರಳು ಮಗುವೊಂದನ್ನು ದತ್ತು ತೆಗೆದುಕೊಂಡಾಗ, ಒಂದು ವರ್ಷದ ಅಥವಾ ದತ್ತು ಮಗುವಿಗೆ ಒಂದು ವರ್ಷ ವಯಸ್ಸಾಗುವವರೆಗೆ ಇವುಗಳಲ್ಲಿ ಯಾವುದು ಕಡಿಮೆಯೋ ಅವರೆಗೆ ಮುಂದುವರಿಯುವಂತೆ ಮತ್ತು ಅನುಮತಿಸಬಹುದಾದ ರಜೆಯನ್ನು (60 ದಿವಸಗಳನ್ನು ಮೀರದಂತೆ ವೈದ್ಯಕೀಯ ಪ್ರಮಾಣಪತ್ರವನ್ನು ಹಾಜರು ಪಡಿಸದೆ ಪರಿವರ್ತಿತ ರಜೆ ಮತ್ತು (ಗಳಿಸಿದ ರಜೆ ಸೇರಿದಂತೆ) ಅಂತಹ ಮಹಿಳಾ ಸರ್ಕಾರಿ ನೌಕರಳು ದತ್ತಕದ ಸಮಯದಲ್ಲಿ ಎರಡು ಜೀವಂತ ಮಕ್ಕಳನ್ನು ಹೊಂದಿರತಕ್ಕದ್ದಲ್ಲ ಎಂಬ ಷರತ್ತಿಗೊಳಪಟ್ಟು ಮಂಜೂರು ಮಾಡತಕ್ಕದ್ದು.[1]

[1] ಸ.ಆ ಸಂಖ್ಯೆ : ಆಇ(ವಿ) 02 ಸೇನಿಸೇ 95 ದಿ: 25.05.1995ರ ಮೂಲಕ ಸೇರಿಸಲಾಗಿದೆ (ದಿ: 01.07.1995 ರಿಂದ ಜಾರಿಗೆ ಬಂದಿದೆ)

* ವಿಭಾಗ – IV ಎ ಪಿತೃತ್ವ ರಜೆ (Paternity Leave)

135ಬಿ (1) [illegible] ಸಂದರ್ಭದಲ್ಲಿ 15 ದಿನಗಳ ಕಾಲ ಪಿತೃತ್ವ ರಜೆಯನ್ನು ಮಂಜೂರು ಮಾಡಬಹುದು.

(2) ಈ ರಜೆಯ ಅವಧಿಯಲ್ಲಿ ಅವನು ರಜೆ ಹೋಗುವುದಕ್ಕೆ ನಿಕಟಪೂರ್ವದಲ್ಲಿ ಪಡೆಯುತ್ತಿದ್ದ ವೇತನಕ್ಕೆ ಸಮನಾದ ರಜೆಯ ವೇತನವನ್ನು ನೀಡಲಾಗುವುದು.

(3) ಎರಡು ಅಥವಾ ಅದಕ್ಕಿಂತ ಹೆಚ್ಚು ಜೀವಂತ ಮಕ್ಕಳಿರುವ ಪುರುಷ ಸರ್ಕಾರಿ ನೌಕರನಿಗೆ ಈ ನಿಯಮವು ಅನ್ವಯಿಸತಕ್ಕದ್ದಲ್ಲ.

(4) ಪಿತೃತ್ವ ರಜೆಯನ್ನು ಯಾವುದೇ ರಜೆಯ ಲೆಕ್ಕದಿಂದ ಕಳೆಯತಕ್ಕದ್ದಲ್ಲ ಹಾಗೂ ಸಾಂದರ್ಭಿಕ ರಜೆಯ ಹೊರತುಪಡಿಸಿ ಇತರ ಯಾವುದೇ ರಜೆಯೊಂದಿಗೆ ಸಂಯೋಜಿಸಬಹುದಾಗಿದೆ.

(5) ಪಿತೃತ್ವ ರಜೆಯನ್ನು ನಗದೀಕರಣಗೊಳಿಸಲು ಅಥವಾ ಗಳಿಕೆ ರಜೆಯೊಂದಿಗೆ ವಿಲೀನಗೊಳಿಸಲು ಆಗುವುದಿಲ್ಲ.

6. ಸಾಮಾನ್ಯವಾಗಿ ಈ ರಜೆಯನ್ನು ನಿರಾಕರಿಸಲಾಗುವುದಿಲ್ಲ.

* [illegible] 2008ರ [illegible] 1998 [illegible]

2202238/2021/DPAR-SR A

No.13018/2/2008-Estt.(L)
Government of India
Ministry of Personnel, Public Grievances & Pensions
[Department of Personnel & Training]
........

New Delhi, the 11th September, 2008.

## OFFICE MEMORANDUM

Subject:- Recommendations of the Sixth Central Pay Commission relating to enhancement of the quantum of Maternity Leave and introduction of Child Care Leave in respect of Central Government employees.

.......

Consequent upon the decisions taken by the Government on the recommendations of the Sixth Central Pay Commission relating to Maternity Leave and Child Care Leave, the President is pleased to decide that the existing provisions of the Central Civil Services (Leave) Rules, 1972 will be treated as modified as follows in respect of civilian employees of the Central Government:-

(a) The existing ceiling of 135 days Maternity Leave provided in Rule 43(1) of Central Civil Services (Leave) Rules, 1972 shall be enhanced to 180 days.

(b) Leave of the kind due and admissible (including commuted leave for a period not exceeding 60 days and leave not due) that can be granted in continuation with Maternity Leave provided in Rule 43(4)(b) shall be increased to 2 years.

(c) Women employees having minor children may be granted Child Care Leave by an authority competent to grant leave, for a maximum period of two years (i.e.730 days) during their entire service for taking care of upto two children whether for rearing or to look after any of their needs like examination, sickness etc. Child Care Leave shall not be admissible if the child is eighteen years of age or older. During the period of such leave, the women employees shall be paid leave salary equal to the pay drawn immediately before proceeding on leave. It may be availed of in more than one spell. Child Care Leave shall not be debited against the leave account. Child Care Leave may also be allowed for the third year as leave not due (without production of medical certificate). It may be combined with leave of the kind due and admissible.

2. These orders shall take effect from 1st September, 2008.

3. In view of paragraph 2 above, a women employee in whose case the period of 135 days of maternity leave has not expired on the said date shall also be entitled to the maternity leave of 180 days.

4. Formal amendments to the Central Civil Services (Leave) Rules, 1972 are being issued separately.

5. In so far as persons serving in the Indian Audit & Accounts Departments are concerned, these orders are issue in consultation with the Comptroller & Auditor General of India.

6. Hindi version will follow.

(Simmi R. Nakra)
Director(P&A)

To

All Ministries/Departments of the Govt. of India, etc.*(As per standard mailing list)*.

[illegible] – 37



34. ರಾಜ್ಯದ ಎಲ್ಲೆಡೆ ಮಹಿಳೆಯರ ಸುರಕ್ಷತೆಯ ದೃಷ್ಟಿಯಿಂದ ರಾತ್ರಿ ಗಸ್ತನ್ನು ತಂತ್ರಜ್ಞಾನ ಆಧಾರಿತ ಇ-ಬೀಟ್ ಮೂಲಕ ತೀವ್ರಗೊಳಿಸಲಾಗುವುದು. ಇದರಿಂದ ಬೀಟ್ ವ್ಯವಸ್ಥೆ ಇನ್ನಷ್ಟು ಉತ್ತಮವಾಗಲಿದೆ.

35. ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಸೂಕ್ತ ನೆರವು ಹಾಗೂ ಮಾರ್ಗದರ್ಶನ ನೀಡಲು ನಿಮ್ಹಾನ್ಸ್ ಮತ್ತು ರಾಷ್ಟ್ರೀಯ ಕಾನೂನು ಶಾಲೆಯ ಸಹಯೋಗದೊಂದಿಗೆ ಹೊಸೂರು ರಸ್ತೆಯ ಸುಧಾರಣಾ ಸಂಸ್ಥೆಗಳ ಆವರಣದಲ್ಲಿ ಒಂದು ಉತ್ಕೃಷ್ಟತಾ ಕೇಂದ್ರವನ್ನು ಸ್ಥಾಪಿಸಲಾಗುವುದು. ಈ ಕೇಂದ್ರವು ಮಹಿಳೆಯರ ರಕ್ಷಣೆಯ ಕುರಿತ ನೀತಿ ನಿರೂಪಣೆಯಲ್ಲಿಯೂ ಸರ್ಕಾರಕ್ಕೆ ನೆರವಾಗಲಿದೆ.

36. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ಲೈಸನ್ಸ್ ಪಡೆದು ಕಾರ್ಯನಿರ್ವಹಿಸುವ ಮಹಿಳೆಯರಿಗೆ ಉತ್ತೇಜನ ನೀಡಲು ಪ್ರಾಂಗಣದಲ್ಲಿನ ನಿವೇಶನ, ಗೋದಾಮು, ಅಂಗಡಿ, ಅಂಗಡಿ-ವ-ಗೋದಾಮುಗಳ ಹಂಚಿಕೆಯಲ್ಲಿ ಶೇ. 10ರಷ್ಟು ಮೀಸಲಾತಿ ಕಲ್ಪಿಸಲಾಗುವುದು.

(ರಾಜ್ಯ ಸರ್ಕಾರದ ಮಹಿಳಾ ಉದ್ಯೋಗಿಗಳಿಗೆ ಚಾಲ್ತಿಯಲ್ಲಿರುವ ಪ್ರಸೂತಿ ರಜೆಯೊಂದಿಗೆ ಒಟ್ಟು ಸೇವಾವಧಿಯಲ್ಲಿ ಆರು ತಿಂಗಳವರೆಗೆ ಮಕ್ಕಳ ಆರೈಕೆ ರಜೆಯನ್ನು ಒದಗಿಸಲಾಗುವುದು.) ಆಡಳಿತ ಯಂತ್ರದ ಬಹುಮುಖ್ಯ ಭಾಗವಾಗಿರುವ ಮಹಿಳೆಯರ ಕ್ಷೇಮಾಭಿವೃದ್ಧಿಗೆ ಇದು ಪೂರಕ ಹೆಜ್ಜೆಯಾಗಲಿದ್ದು, ಮಹಿಳೆಯರ ಕಾರ್ಯಕ್ಷಮತೆಯೂ ಇದರಿಂದ ಹೆಚ್ಚಾಗಲಿದೆ.

5



38. ರಾಜ್ಯದಲ್ಲಿ ಮಹಿಳಾ ವಾಣಿಜ್ಯೋದ್ಯಮಗಳನ್ನು ಬೆಂಬಲಿಸಲು, ಐದು ಕೋಟಿ ರೂ. ವೆಚ್ಚದಲ್ಲಿ Elevate Women Entrepreneurship (Elevate WomEN) ಎಂಬ ಕಾರ್ಯಕ್ರಮವನ್ನು ಜಾರಿಗೆ ತರಲಾಗುವುದು. ಈ ಕಾರ್ಯಕ್ರಮದಡಿ ಹಣಕಾಸು ಸೌಲಭ್ಯ, ಪರಿಪೋಷಣೆ/ ಮಾರ್ಗದರ್ಶನೆಯ ಬೆಂಬಲ, ಜಾಗತಿಕ ಸಂಪರ್ಕ, ತಜ್ಞ ಸಲಹೆ ನೀಡಲಾಗುವುದು.

39. ರಾಜ್ಯದ ಸ್ವ-ಸಹಾಯ ಗುಂಪುಗಳು ಮತ್ತು ಅವುಗಳ ಒಕ್ಕೂಟವನ್ನು ಬಲಪಡಿಸಲು ಸ್ವಸಹಾಯ ಗುಂಪುಗಳ ನೀತಿಯನ್ನು ರೂಪಿಸಲಾಗುವುದು. ಈ ನೀತಿಯ ಮೂಲಕ ಪ್ರಯೋಜನಗಳ ಪುನರಾವರ್ತನೆಯನ್ನು ತಪ್ಪಿಸಲು ರಾಜ್ಯದ ಎಲ್ಲ ಸ್ವ-ಸಹಾಯ ಗುಂಪುಗಳನ್ನು ಜೀವನೋಪಾಯ ಅಭಿಯಾನದಡಿ ತರಲಾಗುವುದು.

40. ನಮ್ಮ ಸರ್ಕಾರದ ಮಹಿಳಾ ಪರ ಚಿಂತನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ನೇರ ಮೇಲ್ವಿಚಾರಣೆಯಲ್ಲಿ 'ಮಹಿಳೆಯರ ರಕ್ಷಣೆ ಮತ್ತು ಸಬಲೀಕರಣ ಅಭಿಯಾನ'ವನ್ನು ಪ್ರಾರಂಭಿಸಲಾಗುವುದು. ಇದರಿಂದ ಮಹಿಳೆಯರ ಸುರಕ್ಷತೆ ಹಾಗೂ ಸಬಲೀಕರಣಕ್ಕೆ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳನ್ನು ವಿವಿಧ ಇಲಾಖೆಗಳ ಮಧ್ಯೆ ಸಮನ್ವಯವನ್ನು ಸಾಧಿಸಿ, ಜಾರಿಗೊಳಿಸಲು ಅನುಕೂಲವಾಗುವುದು.